## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 01-01-2016ಕ್ಕೂ ಪೂರ್ವದಲ್ಲಿ ನಿವೃತ್ತರಾದ ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿನ ನಿವೃತ್ತ ನ್ಯಾಯಾಂಗ ಅಧಿಕಾರಿಗಳ ತುಟ್ಟಿಭತ್ಯೆಯ ದರಗಳನ್ನು ಪರಿಷ್ಕರಿಸುವ ಕುರಿತು.

ಓದಲಾಗಿದೆ:
1. ದಿನಾಂಕ 03-05-2019ರ ಸರ್ಕಾರಿ ಆದೇಶ ಸಂಖ್ಯೆ: ಆಇ 2 ಎಸ್‌ಆರ್‌ಪಿ 2019
2. ದಿನಾಂಕ 02-11-2019ರ ಸರ್ಕಾರಿ ಆದೇಶ ಸಂಖ್ಯೆ: ಆಇ 17 ಎಸ್‌ಆರ್‌ಪಿ 2019
3. ದಿನಾಂಕ 05-05-2020ರ ಸರ್ಕಾರಿ ಆದೇಶ ಸಂಖ್ಯೆ: ಆಇ 10 ಎಸ್‌ಆರ್‌ಪಿ2020
4. ದಿನಾಂಕ 19-08-2021ರ ಸರ್ಕಾರಿ ಆದೇಶ ಸಂಖ್ಯೆ: ಆಇ 20 ಎಸ್‌ಆರ್‌ಪಿ 2021
5. ದಿನಾಂಕ 08-11-2021ರ ಸರ್ಕಾರಿ ಆದೇಶ ಸಂಖ್ಯೆ: ಆಇ 32 ಎಸ್‌ಆರ್‌ಪಿ 2021
6. ದಿನಾಂಕ 09-05-2022ರ ಸರ್ಕಾರಿ ಆದೇಶ ಸಂಖ್ಯೆ: ಆಇ 25 ಎಸ್‌ಆರ್‌ಪಿ 2022
7. ದಿನಾಂಕ 21-01-2023ರ ಸರ್ಕಾರಿ ಆದೇಶ ಸಂಖ್ಯೆ: ಆಇ 1 ಎಸ್‌ಆರ್‌ಪಿ 2023
8. ಭಾರತ ಸರ್ಕಾರದ ದಿನಾಂಕ 10.04.2023ರ ಅಧಿಕೃತ ಜ್ಞಾಪನ ಸಂಖ್ಯೆ: 1/3(1)/2008-E-II(B)

**ಸರ್ಕಾರಿಆದೇಶಸಂಖ್ಯೆ: ಆಇ 11 ಎಸ್‌ಆರ್‌ಪಿ 2023 (ಭಾ)**

**ಬೆಂಗಳೂರು, ದಿನಾಂಕ: 2ನೇ ಜೂನ್ 2023**

ದಿನಾಂಕ:01-01-2016ರ ಪೂರ್ವದಲ್ಲಿ ನಿವೃತ್ತರಾದ 2006ರ ಪರಿಷ್ಕೃತ ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿನ ನಿವೃತ್ತ ನ್ಯಾಯಾಂಗ ಅಧಿಕಾರಿಗಳ ತುಟ್ಟಿಭತ್ಯೆಯ ದರಗಳನ್ನು ಪ್ರಸ್ತುತ ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಶೇಕಡ **212** ರಿಂದ ಶೇಕಡ **221** ಕ್ಕೆ, **1**ನೇ ಜನವರಿ **2023** ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಲು ಸರ್ಕಾರವು ಹರ್ಷಿಸುತ್ತದೆ.

2. ಈ ಆದೇಶದ ಉದ್ದೇಶಗಳಿಗಾಗಿ ನಿವೃತ್ತಿ ವೇತನವು ಮೂಲ ನಿವೃತ್ತಿವೇತನ / ಕುಟುಂಬ ನಿವೃತ್ತಿ ವೇತನವನ್ನು ಮಾತ್ರ ಒಳಗೊಳ್ಳುತ್ತದೆ.

3. ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನವು ಮೂಲಪಿಂಚಣಿ ಎಂದು ಪರಿಗಣಿಸಲ್ಪಡದ ಯಾವುದೇ ಉಪಲಬ್ಧಗಳನ್ನು ಒಳಗೊಳ್ಳತಕ್ಕದ್ದಲ್ಲ.

4. ಈ ಆದೇಶದನ್ವಯ ಲಭ್ಯವಾಗುವ ತುಟ್ಟಿಭತ್ಯೆಯನ್ನು ಮುಂದಿನ ಆದೇಶದವರೆಗೆ ನಗದಾಗಿ ಪಾವತಿ ಮಾಡುವುದು.

5. ಜೂನ್-2023ರ ಪಿಂಚಣಿ / ನಿವೃತ್ತಿ ವೇತನದ ಬಟವಾಡೆಗೂ ಮೊದಲು ತುಟ್ಟಿಭತ್ಯೆಯ ಬಾಕಿ ಮೊತ್ತವನ್ನು ಪಾವತಿಸತಕ್ಕದ್ದಲ್ಲ.

6. 2016ರ ಪರಿಷ್ಕೃತ ಎನ್.ಜೆ.ಪಿ.ಸಿ ವೇತನ ಶ್ರೇಣಿಗಳ ನಿವೃತ್ತ ನ್ಯಾಯಾಂಗ ಅಧಿಕಾರಿಗಳಿಗೆ ಈ ಆದೇಶವು ಅನ್ವಯಿಸುವುದಿಲ್ಲ.

7. ತುಟ್ಟಿಭತ್ಯೆಯ ಕಾರಣದಿಂದ ಸಂದಾಯ ಮಾಡಬೇಕಾಗಿರುವ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

8. ತುಟ್ಟಿಭತ್ಯೆಯನ್ನು ಸಂಭಾವನೆಯ ವಿಶಿಷ್ಟ ಅಂಶವಾಗಿ ತೋರಿಸುವುದು ಮತ್ತು ಯಾವುದೇ ಉದ್ದೇಶಕ್ಕಾಗಿ ಇದನ್ನು ಪಿಂಚಣಿ ಎಂದು ಪರಿಗಣಿಸಲಾಗುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಉಮಾ. ಕೆ.)
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-2).
2/6/2023

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

<u>ಇವರಿಗೆ</u>:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯಕಾರ್ಯದರ್ಶಿಗಳು.
2. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398), ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸಕಟ್ಟಡ, ಆಡಿಟ್ ಭವನ (ಪಿ.ಬಿ. ನಂ.5398), ಬೆಂಗಳೂರು.

4. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329), ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಬೆಂಗಳೂರು
8. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
9. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರನ್ಯಾಯಾಧೀಶರು.
10. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
11. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು.
12. ಯೋಜನಾ ನಿರ್ದೇಶಕರು, ಹೆಚ್‌ಆರ್‌ಎಂಎಸ್ 2.0, ಆರ್ಥಿಕ ಇಲಾಖೆ, 5ನೇ ಮಹಡಿ, ನ್ಯೂ ಕೆ.ಪಿ.ಸಿ.ಎಲ್. ಗ್ರೀನ್ ಬಿಲ್ಡಿಂಗ್ (ಸಿ.ಐ.ಡಿ. ಕಛೇರಿ ಹತ್ತಿರ), ಅರಮನೆ ರಸ್ತೆ, ಬೆಂಗಳೂರು-560001.
13. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
14. ವಾರಪತ್ರ/ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲ ತಾಣ www.finance.kar.nic.in ವೀಕ್ಷಿಸಿ.**